ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾರ್ಮಿಕ ಸಚಿವರು) :

ಅ) ರಾಜ್ಯದಲ್ಲಿ ಸುಮಾರು ಐದು ಲಕ್ಷ ಬೀಡಿ ಕಾರ್ಮಿಕರಿದ್ದಾರೆ.

ಆ) 1) ಕನಿಷ್ಠ ವೇತನ
2) ಬೋನಸ್
3) ರಜಾ ಸಂಬಳ
4) ರಾಷ್ಟ್ರೀಯ ಮತ್ತು ಹಬ್ಬಗಳ ರಜಾಗಳು
5) ವೈದ್ಯಕೀಯ ಸೌಲಭ್ಯ
6) ಕಾರ್ಮಿಕರ ಮಕ್ಕಳಿಗೆ ವಿದ್ಯಾರ್ಥಿ ವೇತನ
7) ವಸತಿ ಯೋಜನೆ

ಇ) 'ನಿಮ್ಮ ಸ್ವಂತ ಮನೆಯನ್ನು ಕಟ್ಟಿಕೊಳ್ಳಿ' ಯೋಜನೆಯಡಿಯಲ್ಲಿ 60 ಮನೆಗಳನ್ನು ಕಟ್ಟಲು ಸಹಾಯ ನೀಡಲಾಗಿದೆ. ಇದರಲ್ಲಿ 18 ಮನೆಗಳು ಈಗಾಗಲೇ ಪೂರ್ಣಗೊಂಡಿರುತ್ತದೆ. ಆರ್ಥಿಕವಾಗಿ ಹಿಂದುಳಿದವರ ಯೋಜನೆಯಡಿಯಲ್ಲಿ 1,425 ಕಾರ್ಮಿಕರಿಗೆ ಧನ ಸಹಾಯವನ್ನು ಮಂಜೂರು ಮಾಡಲಾಗಿದೆ.

ಈ) ಮನೆಗಳನ್ನು ಕಟ್ಟಲು ಈ ಕೆಳಕಂಡಂತೆ ಹಣವನ್ನು ಖರ್ಚು ಮಾಡಲಾಗಿದೆ.
1. 'ನಿಮ್ಮ ಸ್ವಂತ ಮನೆಯನ್ನು ಕಟ್ಟಿಕೊಳ್ಳಿ' ಯೋಜನೆಯಡಿಯಲ್ಲಿ: ರೂ.57,800
2. ಆರ್ಥಿಕವಾಗಿ ಹಿಂದುಳಿದ ವರ್ಗದವರಿಗೆ : ರೂ. 70,75,000

ಉ) ಸಧ್ಯಕ್ಕೆ ಈ ಪ್ರಸ್ತಾಪವಿರುವುದಿಲ್ಲ.

ವಿಷಯ :- ಖಾಸಗಿ ಕಟ್ಟಡದಲ್ಲಿ ಸರ್ಕಾರಿ ಕಛೇರಿ.

Q:913

ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ) : ಮಾನ್ಯ ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ನಿರ್ದೇಶನಾಲಯವನ್ನು ಖಾಸಗಿ ಕಟ್ಟಡದಲ್ಲಿ ನಡೆಸುತ್ತಿರುವುದನ್ನು ವಿರೋಧಿಸಿ ನೌಕರರ ಆರು ಸಂಘಗಳು ಮನವಿಗಳನ್ನು ಸಲ್ಲಿಸಿರುವುದು ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಆ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಇ) ನೀರು ವಿದ್ಯುಚ್ಛಕ್ತಿ, ಬೆಳಕು ಶೌಚಾಲಯ ಹಾಗೂ ಲಿಫ್ಟ್‌ಗಳ ಸೂಕ್ತ ಸೌಲಭ್ಯಗಳಿಲ್ಲದಿರುವಂತಹ ಈ ಕಟ್ಟಡಕ್ಕೆ ಲಕ್ಷಾಂತರ ರೂ.ಗಳನ್ನು ಬಾಡಿಗೆ ರೂಪದಲ್ಲಿ ನೀಡುವುದನ್ನು ನಿಲ್ಲಿಸುವುದು ಸೂಕ್ತವಲ್ಲವೇ?

ಈ) ಸೂಕ್ತವಾಗಿದ್ದಲ್ಲಿ ಸರ್ಕಾರವು ಇದುವರೆಗೂ ಕ್ರಮ ಕೈಗೊಳ್ಳದಿರಲು ಕಾರಣವೇನು?

ಉ) ಸದರಿ ನಿರ್ದೇಶನಾಲಯವನ್ನು ಖಾಸಗಿ ಕಟ್ಟಡದಿಂದ ಸ್ವಂತ ಕಟ್ಟಡಕ್ಕೆ ವರ್ಗಾಯಿಸಲು ಸರ್ಕಾರವು ತಕ್ಷಣ ಕ್ರಮಗಳನ್ನು ಕೈಗೊಳ್ಳಲಾಗುವುದೇ?

ಶ್ರೀ ಡಿ. ಎ. ಚಿಣ್ಣಪ್ಪ (ಗಣಿ ಮತ್ತು ಭೂ ವಿಜ್ಞಾನ ರಾಜ್ಯ ಸಚಿವರು) :

ಅ) ಬಂದಿದೆ.

ಆ) ನೌಕರ ಸಂಘಗಳ ಮನವಿ ಮೇಲೆ ದಿನಾಂಕ 5-8-1992 ಮತ್ತು 4-2-93 ರಂದು ಸಭೆಯನ್ನು ಕರೆದು ಮೈಸೂರು ಮಿನರಲ್ಸ್ ಸಂಸ್ಥೆಯವರಿಗೆ ಅವರು ಖನಿಜ ಭವನ ಕಟ್ಟಡ ಕೆಲಸವನ್ನು ಪ್ರಾರಂಭಿಸಲು ಸಾಧ್ಯವೇ ಹೇಗೆ ಎಂಬ ಬಗ್ಗೆ ಅಂತಿಮ ತೀರ್ಮಾನವನ್ನು ತಿಳಿಸಲು ಸೂಚಿಸಲಾಗಿದೆ.

ಇ) ಬದಲಿ ವ್ಯವಸ್ಥೆಯಾಗುವವರೆಗೆ ಇದು ಅನಿವಾರ್ಯ

ಈ) ಖನಿಜ ಭವನ ನಿರ್ಮಾಣವಾಗುವವರೆಗೆ, ಈಗ ಇರುವ ಕಟ್ಟಡವನ್ನು ಹುಡುಕುವ ಉದ್ದೇಶದಿಂದ ಪತ್ರಿಕೆಗಳಲ್ಲಿ ಪ್ರಕಟಣೆಯನ್ನು ದಿನಾಂಕ 14-9-92 ರಂದು ನೀಡಲಾಗಿತ್ತು. ಆದರೆ ಈಗಿರುವ ಕಟ್ಟಡಕ್ಕಿಂತ ಸೂಕ್ತವಾದ ಕಟ್ಟಡವು ದೊರಕದ ಕಾರಣ ಇಲಾಖೆಯ ಸ್ವಂತ ಕಟ್ಟಡವನ್ನು ದುರಸ್ತಿಪಡಿಸಿಕೊಂಡು ಅಲ್ಲಿಗೆ ನಿರ್ದೇಶನಾಲಯವನ್ನು ಸ್ಥಳಾಂತರಿಸಲು ಸಾಧ್ಯವೇ ಎಂಬುವ ಬಗ್ಗೆಯೂ ಸರ್ಕಾರವು ಪರಿಶೀಲಿಸುತ್ತಿದೆ.

ಉ) ಖನಿಜ ಭವನ ಕಟ್ಟಡದ ಬಗ್ಗೆ ಅಂತಿಮ ತೀರ್ಮಾನವಾದ ನಂತರ ಈ ಬಗ್ಗೆ ನಿರ್ಧರಿಸಲಾಗುವುದು.

ವಿಷಯ :- ಗಾಮಿಣ ಪ್ರದೇಶದ ವಿದ್ಯಾರ್ಥಿನಿಯರಿಗೆ ಸ್ಕಾಲರ್‌ಶಿಪ್.

Q:1553

ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಗ್ರಾಮಿಣ ಪ್ರದೇಶದ ಬಡ ವಿದ್ಯಾರ್ಥಿನಿಯರಿಗೆ ಸ್ಕಾಲರ್‌ಶಿಪ್ ನೀಡಲಾಗುತ್ತಿದೆಯೇ?

ಆ) ಹಾಗಿದ್ದಲ್ಲಿ, 1991-92 , 1992-93ನೇ ಸಾಲುಗಳಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

ಇ) ಮಾಗಡಿ ತಾಲ್ಲೂಕಿನಲ್ಲಿ ಎಷ್ಟು ಜನ ವಿದ್ಯಾರ್ಥಿನಿಯರಿಗೆ ಎಷ್ಟು ಹಣ ನೀಡಲಾಗಿದೆ?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ)

1991-92	1992-93
ರೂ. 80.00 ಲಕ್ಷ	ರೂ. 80.00 ಲಕ್ಷ

(1991-92 ನೇ ಸಾಲಿನಲ್ಲಿ ಮಂಜೂರು ಮಾಡಿದ್ದ ಹಣವನ್ನು 1992-93ನೇ ಸಾಲಿನಲ್ಲಿ ಖರ್ಚು ಮಾಡಲಾಗುತ್ತಿದೆ. ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ).

		(ರೂ. ಗಳಲ್ಲಿ)
1.	ಬೆಂಗಳೂರು (ಗ್ರಾ)	10,46,500